# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 683 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21-02-2023 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಮುನ್ಸಿಪಲ್ ಕಾಯ್ದೆ ತಿದ್ದುಪಡಿ ಮಾಡಲು ಕಾರಣಗಳೇನು; ಸದರಿ ಕಾಯ್ದೆ ತಿದ್ದುಪಡಿ ಆದ ನಂತರ ಬಿ.ಬಿ.ಎಂ.ಪಿ. ಯನ್ನು ಹೊರತುಪಡಿಸಿ ಆದೇಶಿಸಿರುವುದಕ್ಕೆ ಕಾರಣಗಳೇನು; | ಭಾರತ ಸಂವಿಧಾನದ 74ನೇ ತಿದ್ದುಪಡಿ ಕಾಯ್ದೆಯು ನಗರ ಸ್ಥಳೀಯ ಸಂಸ್ಥೆಗಳಿಗೆ ಸಂವಿಧಾನಿಕ ಸ್ಥಾನವನ್ನು ನೀಡಿದ್ದು, ಸ್ಥಳೀಯ ಸಂಸ್ಥೆಗಳನ್ನು ಸ್ವಾಯತ್ತ ಸರ್ಕಾರ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಲು ಅಗತ್ಯವಾದ ಅಧಿಕಾರ ಹಾಗೂ ಅಧಿಪತ್ಯವನ್ನು ನೀಡಲು ಮತ್ತು ಜವಾಬ್ದಾರಿಗಳನ್ನು ವಹಿಸಲು ನಿಬಂಧನೆಗಳನ್ನು ರಚಿಸಲು ರಾಜ್ಯ ಶಾಸಕಾಂಗಗಳನ್ನು ಅಧಿಕೃತಿಸಲಾಗಿದೆ ಹಾಗೂ ಸಂವಿಧಾನದ 12ನೇ ಅನುಸೂಚಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳು ನಿರ್ವಹಿಸಬೇಕಾದ 18 ಪ್ರಕಾರ್ಯಗಳನ್ನು ನಿರ್ದಿಷ್ಟಪಡಿಸಲಾಗಿದೆ. ಅದಕ್ಕೆ ಪೂರಕವಾಗಿ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ಮತ್ತು ಕರ್ನಾಟಕ ಪೌರನಿಗಮಗಳ ಅಧಿನಿಯಮ, 1976 ಗಳಿಗೆ ತಿದ್ದುಪಡಿ ತರಲಾಗಿದೆ.<br><br>ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿನ ನಾಗರೀಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ನಿರ್ವಹಣೆ ಮಾಡುವುದು ಹಾಗೂ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸುವಂತಹ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿರ್ವಹಿಸಲು ನಗರ ಸ್ಥಳೀಯ ಸಂಸ್ಥೆಗಳನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಹಾಗೂ ನಗರೀಕರಣ, ಆಧುನೀಕರಣ ಹಾಗೂ ಇನ್ನಿತರೆ ಬದಲಾವಣೆಗಳನ್ನು ಕಾಯ್ದೆಗಳಲ್ಲಿ ಸೂಕ್ತವಾಗಿ ಅಳವಡಿಸಿಕೊಳ್ಳಲು ಕಾಲಕಾಲಕ್ಕೆ ಮುನಿಸಿಪಲ್ ಕಾಯ್ದೆಯನ್ನು ತಿದ್ದುಪಡಿ ಮಾಡಲಾಗುತ್ತಿದೆ.<br><br>ಬಿ.ಬಿ.ಎಂ.ಪಿ.ಯು ಪೌರಾಡಳಿತ ನಿರ್ದೇಶನಾಲಯದ ವ್ಯಾಪ್ತಿಗೆ ಒಳಪಡದಿರುವುದರಿಂದ ಹಾಗೂ ಪ್ರತ್ಯೇಕ ಕಾಯ್ದೆಯಡಿ ನಿರ್ವಹಿಸಲ್ಪತ್ತಿರುವುದರಿಂದ, ಬಿ.ಬಿ.ಎಂ.ಪಿ.ಯನ್ನು ಹೊರತುಪಡಿಸಲಾಗಿದೆ. |
| ಆ) | ಪ್ರಸ್ತುತ ಸಾಲಿನ ಆಸ್ತಿ ತೆರಿಗೆಯಲ್ಲಿ ಗೊಂದಲಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ಮುನಿಸಿಪಲ್ ಕಾಯ್ದೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕುರಿತು ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: 292724/ಡಿಎಂಎ/ಡಿಇವಿ/ಟ್ಯಾಕ್ಸ್ 3/2020, ದಿನಾಂಕ: 19.02.2021ರಲ್ಲಿ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಕೆಲವು ಉದಾಹರಣೆಗಳೊಂದಿಗೆ ಸ್ಪಷ್ಟ |

| | | |
|---|---|---|
| | | ನಿರ್ದೇಶನಗಳನ್ನು ನೀಡಲಾಗಿದೆ. ನಾಗರೀಕರಿಗೆ ಹೆಚ್ಚಿನ ಹೊರೆಯಾಗದಂತೆ ಹಾಗೂ ಹಿಂದಿನ ಸಾಲಿನ ಬೇಡಿಕೆಗಿಂತ ಕಡಿಮೆ ಆಗದಂತೆ ತೆರಿಗೆ ನಿರ್ಧರಣೆ ಮಾಡಲು ಸೂಚನೆ ನೀಡಲಾಗಿದೆ ಹಾಗೂ ಸದರಿ ನಿಯಮಗಳನ್ನು ಅನುಷ್ಠಾನಗೊಳಿಸಲು ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಪೌರಾಡಳಿತ ನಿರ್ದೇಶನಾಲಯದಿಂದ ತರಬೇತಿಯನ್ನು ಸಹ ನೀಡಲಾಗಿದೆ. |
| ಇ) | ಆಸ್ತಿ ತೆರಿಗೆಯಲ್ಲಿ ಖಾಲಿ ನಿವೇಶನಕ್ಕೆ ಈಗಿನ (ಪ್ರಸ್ತುತ) ಎಸ್.ಆರ್. ದರದಲ್ಲಿ ತೆರಿಗೆ ಸಂಗ್ರಹ ಮಾಡಲು ಕಾರಣಗಳೇನು? | 15ನೇ ಹಣಕಾಸು ಆಯೋಗದ ಅನುದಾನ ಪಡೆಯುವ ನಿಟ್ಟಿನಲ್ಲಿ ಅರ್ಹರಾಗಲು ಮತ್ತು ನಗರ ಸ್ಥಳೀಯ ಸಂಸ್ಥೆಗಳನ್ನು ಆರ್ಥಿಕವಾಗಿ ಸದೃಢಗೊಳಿಸಿವ ನಿಟ್ಟಿನಲ್ಲಿ ಆಸ್ತಿ ತೆರಿಗೆಯನ್ನು ಚಾಲ್ತಿ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಯ (ಎಸ್.ಆರ್. ದರ) ಆಧಾರದ ಮೇಲೆ ವಿಧಿಸಲು ಕೇಂದ್ರ ಸರ್ಕಾರವು ನಿರ್ದೇಶಿಸಿರುವುದರಿಂದ ಖಾಲಿ ನಿವೇಶನಗಳನ್ನು ಒಳಗೊಂಡಂತೆ ಎಲ್ಲಾ ಆಸ್ತಿಗಳಿಗೆ ತೆರಿಗೆಯನ್ನು ಸಂಗ್ರಹಿಸಲಾಗುತ್ತಿದೆ. |

ಸಂಖ್ಯೆ: ನಅಇ 41 ಎಂಎನ್ಇ 2023(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜು)
ನಗರಾಭಿವೃದ್ಧಿ ಸಚಿವರು